AUGUST 14, 2025

AKASHAVANI - DHARWAD

PRADESH SAMACHARA (KANNADA) 12 PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ನಾಡಿನಾದ್ಯಂತ ಹರ್ ಘರ್ ತಿರಂಗಾ ಅಭಿಯಾನ ಆಯೋಜಿಸಲಾಗಿದೆ. ವಿಜಯನಗರ ಜಿಲ್ಲೆ ಹೊಸಪೇಟೆಯಲ್ಲಿ ಜರುಗಿದ ಹರ್ ಘರ್ ತಿರಂಗಾ, ಬೈಕ್ ರ್‍ಯಾಲಿಗೆ ನಗರಸಭೆ ಅಧ್ಯಕ್ಷ ಎನ್. ರೂಪೇಶ್ ಕುಮಾರ್ ಚಾಲನೆ ನೀಡಿದರು. ಈ ಸಂದರ್ಭ ಮಾತನಾಡಿದ ಅವರು, ಭಾವೈಕ್ಯತೆ ಹಾಗೂ ದೇಶಭಕ್ತಿಯ ಸಂಕೇತವಾದ ಹರ್ ಘರ್ ತಿರಂಗಾ ಅಭಿಯಾನದಲ್ಲಿ ಎಲ್ಲರೂ ಪಾಲ್ಗೊಳ್ಳುವಂತೆ ಕರೆ ನೀಡಿದರು. ಬೈಕ್ ರ್‍ಯಾಲಿಯಲ್ಲಿ ಪಾಲ್ಗೊಂಡ ಸಾರ್ವಜನಿಕರು ವಂದೇ ಮಾತರಂ ಘೋಷಣೆಯನ್ನು ಮೊಳಗಿಸಿದರು. ಧಾರವಾಡದಲ್ಲಿ ಜರುಗಿದ ಬೈಕ್ ರ್‍ಯಾಲಿಗೆ, ಕೊಪ್ಪದಗೇರಿ ಶಿವಾಲಯದ ಬಳಿ ಮಹಾನಗರ ಪಾಲಿಕೆ ಸಭಾ ನಾಯಕ ಈರೇಶ ಅಂಚಟಗೇರಿ ಚಾಲನೆ ನೀಡಿದರು. ಮೈಸೂರಿನಲ್ಲಿ, ದಸರಾ ಗಜಪಡೆ, ಕ್ಯಾಪ್ಟನ್ ಅಭಿಮನ್ಯು ನೇತೃತ್ವದ ಆನೆಗಳು, ಸೊಂಡಿಲಿನ ಮೂಲಕ ರಾಷ್ಟ್ರಧ್ವಜ ಹಿಡಿದು, ಸಾಗುವ ಮೂಲಕ ನಗರ ಸ್ವಚ್ಛತೆಯ ಸಂದೇಶ ಸಾರಿದವು.

<><><>

79 ನೇ ಸ್ವಾತಂತ್ರ್ಯ ದಿನಾಚರಣೆ ಹಿನ್ನೆಲೆ, ರಾಜ್ಯದ ವಿವಿಧ ಜಿಲ್ಲಾಡಳಿತಗಳಿಂದ ಅಂತಿಮ ಹಂತದ ಸಿದ್ಧತೆಗಳು ನಡೆಯುತ್ತಿವೆ. ನಾಳೆ ಹಾಸನ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿತ ಸಮಾರಂಭದಲ್ಲಿ, ರಾಜ್ಯಸಭೆ ಸಂಸದ ಹೆಚ್.ಡಿ ದೇವೆಗೌಡ ಪಾಲ್ಗೊಳ್ಳಲಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ ಅವರು ಧ್ವಜಾರೋಹಣ ನೆರವೇರಿಸಿ, ಸ್ವಾತಂತ್ರ್ಯ ದಿನದ ಸಂದೇಶ ನೀಡಲಿದ್ದಾರೆ.

<><><>

ಆತ್ಮನಿರ್ಭರ ಭಾರತ, ಪ್ರಧಾನಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಬದ್ಧಗೊಳಿಸುವಿಕೆ ಯೋಜನೆಯಡಿ, ಆರ್ಥಿಕ ಸಹಕಾರ ಪಡೆದು, ಎಣ್ಣೆ ಗಾಣಗಳನ್ನು ಸ್ಥಾಪಿಸಿ, ಖಾದ್ಯ ಎಣ್ಣೆ ತಯಾರಿ ಹಾಗೂ ಪೂರೈಕೆ ಉದ್ಯಮ ನಡೆಸುತ್ತಿದ್ದಾರೆ ವಿಜಯನಗರ ಜಿಲ್ಲೆ, ಹಗರಿಬೊಮ್ಮನಹಳ್ಳಿ ತಾಲೂಕಿನ ಶಿವಕುಮಾರ, ಪ್ರದೇಶ ಸಮಾಚಾರಕ್ಕಾಗಿ ಅವರು ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

<><><>

ಧ್ವನಿ: ಶಿವಕುಮಾರ 38 ಸೆಕೆಂದುಗಳು

<><><>

ಸರ್ಕಾರ ಜಾರಿಗೊಳಿಸಿರುವ ಪಂಚ ಗ್ಯಾರಂಟಿ ಯೋಜನೆಗಳು ಹಾಗೂ ಸರ್ಕಾರದ ಜನಪ್ರಿಯ ಯೋಜನೆಗಳ ಮಾಹಿತಿಯನ್ನು ಜನರಿಗೆ ತಲುಪಿಸುವ ಮತ್ತು ಜನಜಾಗೃತಿ ಮೂಡಿಸುವ ನಿಟ್ಟಿನಲ್ಲಿ, ವಿಜಯಪುರ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಚೇರಿಯ ಆವರಣದಲ್ಲಿ, ಬೀದಿ ನಾಟಕ ಹಾಗೂ ಜಾನಪದ ಕಲಾ ತಂಡಗಳ ಆಯ್ಕೆ ಪ್ರಕ್ರಿಯೆ ನಡೆಯಿತು. ಕಲಾವಿದರನ್ನು ಉದ್ದೇಶಿಸಿ ಮಾತನಾಡಿದ ಸಹಾಯಕ ಕೃಷಿ ನಿರ್ದೇಶಕ ಶಿವನಗೌಡ ಪಾಟೀಲ್ ಅವರು, ಪಂಚ ಗ್ಯಾರಂಟಿಗಳ ಯೋಜನೆ ಹಾಗೂ ಸರ್ಕಾರಗಳ ವಿವಿಧ ಜನಪರ ಯೋಜನೆಗಳ ಬಗ್ಗೆ ಜನರಿಗೆ ತಿಳಿವಳಿಕೆ ಮೂಡಿಸುವಲ್ಲಿ ಬೀದಿ ನಾಟಕ ಹಾಗೂ ಜಾನಪದ ಕಲಾತಂಡಗಳ ಪಾತ್ರ ಪರಿಣಾಮಕಾರಿ ಎಂದರು.

<><><>

ಮಾಸಿಕ ಗೌರವಧನವನ್ನು ಹೆಚ್ಚಿಸಬೇಕು, ಕೇಂದ್ರದ ಪ್ರೋತ್ಸಾಹ ಧನ ಸೇರಿಸಿ, ಪ್ರತಿ ತಿಂಗಳು ಕನಿಷ್ಠ 10 ಸಾವಿರ ರೂಪಾಯಿ ನೀಡಬೇಕೆಂದು ಆಗ್ರಹಿಸಿ, ಆಶಾ ಕಾರ್ಯಕರ್ತೆಯರು ಬಳ್ಳಾರಿ ಜಿಲ್ಲಾಡಳಿತ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಿದರು.

<><><>

ಗದಗ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಅಂತಾರಾಷ್ಟ್ರೀಯ ಯುವ ದಿನ ಹಾಗೂ ಎಚ್.ಐ.ವಿ. ಅರಿವಿನ ಮಾಸಾಚರಣೆ ಕಾರ್ಯಕ್ರಮ, ಗದಗ ನಗರದ ವಿದ್ಯಾದಾನ ಸಮಿತಿ, ಶಿಕ್ಷಣ ಸಂಸ್ಥೆ ಸಭಾಂಗಣದಲ್ಲಿ ಜರುಗಿತು. ಕಾರ್ಯಕ್ರಮವನ್ನು ಡಾಕ್ಟರ ಅರುಂಧತಿ ಕೆ. ಉದ್ಘಾಟಿಸಿದರು.

<><><>

ಸಾರ್ವಜನಿಕರಿಗೆ ಸರ್ಕಾರದ ಎಲ್ಲ ಸೇವೆಗಳು ನಿಗದಿತ ಅವಧಿಯಲ್ಲಿ ತಲುಪಿಸುವ ಉದ್ದೇಶದಿಂದ ಜಾರಿಗೆ ತರಲಾದ ಸಕಾಲ ಯೋಜನೆ ಅನು ಷ್ಠಾನದಲ್ಲಿ, ಇನ್ನ ಷ್ಟ ಕಾರ್ಯಕ್ಷಮತೆ ತರುವಂತೆ ಗದಗ ಜಿಲ್ಲಾ ಅಪರ ಜಿಲ್ಲಾಧಿಕಾರಿ ಡಾಕ್ಟರ ದುರಗೇಶ್ ಕೆ.ಆರ್. ಸೂಚಿಸಿದ್ದಾರೆ. ಗದಗನಲ್ಲಿ ಸಕಾಲ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಈ ಸೂಚನೆ ನೀಡಿದರು.

<><><>

ನಿರುದ್ಯೋಗಿ ಯುವತಿಯರು, ಮಹಿಳೆಯರಿಗೆ ಉದ್ಯೋಗಾವಕಾಶ ಕಲ್ಪಿಸುವ ನಿಟ್ಟಿನಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಮಹಿಳಾ ಉದ್ಯೋಗ ಕೋಶ ತೆರೆಯಲಾಗಿದೆ. ಜಿಲ್ಲೆಯ 18 ರಿಂದ 35 ವ ರ್ಷದೊಳಗಿನ ಉದ್ಯೋಗ ಮಾಡಲು ಆಸಕ್ತಿ ಇರುವ ಯುವತಿಯರು ಮತ್ತು ಮಹಿಳೆಯರು ಉಪ ನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ, ನೊಂದಾಯಿಸಿಕೊಳ್ಳಬಹುದು ಎಂದು ಪ್ರಕಟಣೆ ತಿಳಿಸಿದೆ.

<><><>

ಬರುವ ಸೆಪ್ಟಂಬರ್ 13 ರಂದು ನಡೆಯುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ, ಕಳೆದ ಬಾರಿಗಿಂತ ಹೆಚ್ಚು ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಬಗೆಹರಿಸುವ ಗುರಿ ಹೊಂದಲಾಗಿದೆ ಎಂದು ಕಾರವಾರ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ದಿವ್ಯಶ್ರೀ ಸಿ.ಎಂ ಹೇಳಿದ್ದಾರೆ.

ಕಾರವಾರದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ 5 ಸಾವಿರ ಪ್ರಕರಣಗಳನ್ನು ಕಕ್ಷಿದಾರರಿಗೆ ಹೊರೆಯಾಗದಂತೆ ಶೀಘ್ರವಾಗಿ ಇತ್ಯರ್ಥ ಮಾಡುವ ಗುರಿ ಹೊಂದಲಾಗಿದೆ ಎಂದರು.

<><><>

ಮೈಸೂರಿನಲ್ಲಿ ಜರುಗುತ್ತಿರುವ, ಮಹಾರಾಜ ಟ್ರೋಫಿ–2025, ಟಿ–20 ಕ್ರಿಕೆಟ್ ಪಂದ್ಯಾವಳಿಯಲ್ಲಿ, ಮೊಹಮ್ಮದ್ ತಹಾ ಅವರ ಶತಕದ ನೆರವಿನಿಂದ ಹುಬ್ಬಳ್ಳಿ ಟೈಗರ್ಸ್ ತಂಡವು, ಬೆಂಗಳೂರು ಬ್ಲಾಸ್ಟರ್ಸ್ ತಂಡವನ್ನು ಎರಡು ವಿಕೆಟ್ ಗಳಿಂದ ಮಣಿಸಿತು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>